ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೆರಡನೆಯ ಅಧಿವೇಶನ

ಮಂಗಳವಾರ, ದಿನಾಂಕ : 15 ನೇ ಡಿಸೆಂಬರ್, 2020

ತೋಟಗಾರಿಕೆ ಇಲಾಖೆಯಲ್ಲಿ ಅನುಷ್ಠಾನಗೊಳಿಸುತ್ತಿರುವ ಯೋಜನೆಗಳ ಬಗ್ಗೆ

ಶ್ರೀ ಎಸ್. ರವಿ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) -

711 (791) ಮಾನ್ಯ ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ರಾಜ್ಯದಲ್ಲಿ ತೋಟಗಾರಿಕೆ ಅಭಿವೃದ್ಧಿಗಾಗಿ ಅನುಷ್ಠಾನಗೊಳ್ಳುತ್ತಿರುವ ಕೇಂದ್ರ/ರಾಜ್ಯ ಸರ್ಕಾರದ ಯೋಜನೆಗಳು ಎಷ್ಟು; ಸದರಿ ಯೋಜನೆಗಳಲ್ಲಿ ರೈತರಿಗೆ ನೀಡುವ ಎಸ್‌ಸಿಪಿ/ಟಿಎಸ್‌ಪಿ ಶೇಕಡ ಸಹಾಯಧನ ಎಷ್ಟು;

(ಆ) 2020-21ನೇ ಸಾಲಿನಲ್ಲಿ ರೈತರಿಗೆ ಕೇಂದ್ರ ಸರ್ಕಾರದ ಯೋಜನೆಗಳಿಗೆ ರಾಜ್ಯ ಸರ್ಕಾರದಿಂದ ಎಸ್‌ಸಿಪಿ/ಟಿಎಸ್‌ಪಿ ಹೊಂದಾಣಿಕೆ ಮೊತ್ತವನ್ನು ನೀಡಲಾಗುತ್ತಿದೆಯೇ; ನೀಡಲಾಗುತ್ತಿದ್ದಲ್ಲಿ, ಎಷ್ಟು ಮೊತ್ತ ನೀಡಲಾಗಿದೆ;

(ಇ) 2019-20ನೇ ಸಾಲಿನಲ್ಲಿ ತೋಟಗಾರಿಕೆ ಇಲಾಖೆಯಲ್ಲಿ ಅನುಷ್ಠಾನಗೊಳಿಸಿರುವ ಎಲ್ಲಾ ಯೋಜನೆಗಳನ್ನು ಪ್ರಸಕ್ತ ಸಾಲಿನಲ್ಲಿ ಅನುಷ್ಠಾನಗೊಳಿಸಲಾಗುತ್ತಿದೆಯೇ;

(ಈ) ಪ್ರಸಕ್ತ ಸಾಲಿನಲ್ಲಿ 30 ಹೆಚ್‌ಪಿ ಟ್ರ್ಯಾಕ್ಟರ್‌ಗಳಿಗೆ ಸಹಾಯಧನ ನೀಡಲಾಗುತ್ತಿದೆಯೇ; ನೀಡಲಾಗುತ್ತಿದ್ದಲ್ಲಿ, ಸಹಾಯಧನದ ಮೊತ್ತ ಎಷ್ಟು; ಇಲ್ಲವಾದಲ್ಲಿ, ಯಾವ ಕಾರಣಕ್ಕೆ ನೀಡಲಾಗುತ್ತಿಲ್ಲ?